# ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು.

**ವಿಷಯ:** 2024-25 ನೇ ಸಾಲಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2024 ರಿಂದ ಜೂನ್ - 2024 ರ ವರೆಗಿನ ಅವಧಿಗೆ ಮೊದಲನೇ ಕಂತಿನ ಗೌರವಧನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**1. 2023-24 ನೇ ಸಾಲಿನ ಆಯವ್ಯಯದನ್ವಯ ಆರ್ಥಿಕ ಇಲಾಖೆಯು ನಿಗದಿಪಡಿಸಿದಂತೆ.

2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022.

***

**ಪ್ರಸ್ತಾವನೆ:**

2024-25ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ: 2515-00-198-1-11-300ರಡಿ ₹ 27378.24 ಲಕ್ಷಗಳ ಅನುದಾನವನ್ನುಒದಗಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(1)ರ ಸರ್ಕಾರಿ ಆದೇಶದಲ್ಲಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರುಗಳಿಗೆ ಪ್ರತಿ ಮಾಹೆಯಾನ ₹.6000/-ಗಳು, ಉಪಾಧ್ಯಕ್ಷರುಗಳಿಗೆ ₹.4000/- ಗಳು ಹಾಗೂ ಸದಸ್ಯರುಗಳಿಗೆ ₹.2000/-ಗಳ ಗೌರವಧನ ನಿಗದಿಪಡಿಸಲಾಗಿದೆ.

2024-25ನೇ ಸಾಲಿನ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳ ಗೌರವಧನ ಪಾವತಿಯನ್ನು BMS ಮಾಡ್ಯೂಲ್ ಮೂಲಕ ಆಯಾ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಿದ ಮಾಹಿತಿಯಂತೆ, ರಾಜ್ಯದಲ್ಲಿನ ಒಟ್ಟು 5949 ಗ್ರಾಮ ಪಂಚಾಯತಿಗಳಲ್ಲಿ, ಗ್ರಾಮ ಪಂಚಾಯತಿ ಅಧ್ಯಕ್ಷರು – 5,882, ಉಪಾಧ್ಯಕ್ಷರು – 5,881 ಹಾಗೂ ಸದಸ್ಯರು - 82,049 ರಷ್ಟು ಇರುತ್ತಾರೆ. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2024 ರಿಂದ ಜೂನ್ - 2024ರ ವರೆಗಿನ ಅವಧಿಗೆ ಮೊದಲನೇ ಕಂತಿನ ಗೌರವಧನವನ್ನು 2024-25ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ಒದಗಿಸಲಾದ ಅನುದಾನದಲ್ಲಿ **₹ 66,87,42000/-**ಗಳನ್ನು ಅನುಬಂಧದನ್ವಯ ನಿಗದಿಪಡಿಸಲಾಗಿರುವಂತೆ ಬಿಡುಗಡೆಗೊಳಿಸಲು ನಿರ್ಧರಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: ಕಪಂರಾಆ/ಅಭಿವೃದ್ಧಿ/304/ಸ.ಗೌ.ಧ/2024, ಬೆಂಗಳೂರು ದಿನಾಂಕ: 27.05.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024-25ನೇ ಸಾಲಿಗೆ ಆರ್ಥಿಕ ವರ್ಷದ ಏಪ್ರಿಲ್- 2024 ರಿಂದ ಜೂನ್ - 2024 'ರವರೆಗಿನ ಅವಧಿಗೆ ಮಾತ್ರ ಅನ್ವಯಿಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಾದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ಲಭ್ಯವಿರುವ ₹ 27378.24 ಲಕ್ಷಗಳ ಅನುದಾನದಲ್ಲಿ **₹ 66,87,42000/-**(ಅರವತ್ತಾರು ಕೋಟಿ ಎಂಭತ್ತೇಳು ಲಕ್ಷದ ನಲವತ್ತೆರಡು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಗ್ರಾಮ ಪಂಚಾಯಿತಿಗಳ ಗೌರವಧನ ಖಾತೆಗಳಿಗೆ ಖಜಾನೆ-2 ರ ಮೂಲಕ ಬಿಡುಗಡೆಗೊಳಿಸಲು ಆದೇಶಿಸಿದೆ.

**ಮಾಸಿಕ ಗೌರವಧನದ ಮೊತ್ತಗಳನ್ನು ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪಾವತಿಸುವುದು.**

1. ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಬಿಡುಗಡೆಗೊಳಿಸಿರುವ ಮಾಸಿಕ ಗೌರವಧನದ ಪಂಚಾಯತಿವಾರು ಮೊತ್ತಗಳನ್ನು ಈ ಆದೇಶದೊಂದಿಗೆ ಲಗತ್ತಿಸಿದ ಅನುಬಂಧದಲ್ಲಿ ನೀಡಲಾಗಿದೆ. ಗ್ರಾಮ ಪಂಚಾಯತಿವಾರು ಗೌರವಧನದ ಮೊತ್ತಗಳನ್ನು ಅನುಬಂದದಲ್ಲಿಇರುವಂತೆ, ಗ್ರಾಮ ಪಂಚಾಯತಿ ಸದಸ್ಯರ ಗೌರವಧನ ಬ್ಯಾಂಕ್ ಖಾತೆಗಳಿಗೆ ಖಜಾನೆ -2 ರಿಂದ BMS ಮಾಡ್ಯೂಲ್ ಮೂಲಕ ನೇರವಾಗಿ ಬಿಡುಗಡೆ ಮಾಡುವುದು.

2. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತಗಳನ್ನು ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2024 ರಿಂದ ಜೂನ್ - 2024 ರವರೆಗಿನ ಗೌರವಧನ ಪಾವತಿಸಲು ಮಾತ್ರ ವಿನಿಯೋಗಿಸುವುದು. ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
3. ನಿಗಧಿತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸಿರುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದು ಹಾಗೂ ಗೌರವಧನದ ಅನುದಾನವು Scale based budget ಆಗಿರುವುದರಿಂದ ಆಯಾ ವರ್ಷದ ಅನುದಾನವನ್ನು ಆಯಾ ವರ್ಷದಲ್ಲಿಯೇ ವಿನಿಯೋಗಿಸಬೇಕಾಗಿದ್ದು, ಸದರಿ ಆರ್ಥಿಕ ಸಾಲಿನಲ್ಲಿ ಬಿಡುಗಡೆಯಾದ ಗೌರವಧನಕ್ಕೆ ಸಂಬಂಧಿತ ಯಾವುದೇ ವಿಚಾರಣೆಗಳಿದ್ದಲ್ಲಿ ಬಿಡುಗಡೆಗೊಳಿಸಿದ 15 ದಿನಗಳೊಳಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್.ಡಿ 02 ಟಿ ಎಫ್ ಪಿ 2024, ದಿನಾಂಕ:01.04.2024 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**(ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ. ರಾಜ್) ರವರಿಂದ ಅನುಮೋದಿತ)**

ನಿರ್ದೇಶಕರು (ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ನಿರ್ವಾಹಕ ಅಧಿಕಾರಿಗಳು
6. ಆರ್ಥಿಕ ಅಧಿಕಾರಿ, ಲೆಕ್ಕ ಪತ್ರ ಶಾಖೆ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
7. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವುದು)
8. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
9. ಉಪ ನಿರ್ದೇಶಕರು, ಎನ್.ಎಂ.ಸಿ., ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು.
10. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ).
11. ವ್ಯವಸ್ಥಾಪಕರು, ಭಾರತೀಯ ಸ್ಟೇಟ್‌ಬ್ಯಾಂಕ್, ವಿಧಾನಸೌಧ ಶಾಖೆ, ಬೆಂಗಳೂರು-01- ಇವರಿಗೆ ಅಗತ್ಯಕ್ರಮಕ್ಕಾಗಿ.
12. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
13. ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ- ಇಲಾಖಾ ವೆಬ್‌ಸೈಟ್‌ನಲ್ಲಿ
14. ಮಾಹಿತಿ ಕೇಂದ್ರ / ವೆಬ್‌ಸೈಟ್, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಸಹಾಯಕರು ಬೆಂಗಳೂರು.
4. ನಿರ್ದೇಶಕರು(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
5. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತಕ್ಕೆ.